ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ದಾವಣಗೆರೆ ಜಿಲ್ಲೆಯ ನೀರು ಸರಬರಾಜು ಯೋಜನೆಯ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

735 (667) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಾವಣಗೆರೆ ಜಿಲ್ಲೆಯ ನೀರು ಸರಬರಾಜು ಯೋಜನೆಯಲ್ಲಿ ರೂ. 47.55 ಕೋಟಿ ರೂಗಳ ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಅವ್ಯವಹಾರದಲ್ಲಿ ಭಾಗಿಯಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ದಾವಣಗೆರೆ ಜಿಲ್ಲೆಯ ಹಿಂದುಳಿದ ಬರಗಾಲ ಪೀಡಿತ ಜನರಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸಲು ವಿಫಲವಾಗಿರುವ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಮೇಲೆ ಕೈಗೊಂಡ ಕ್ರಮಗಳೇನು ಸರ್ಕಾರದ ಹಣವನ್ನು ಪೋಲು ಮಾಡಿರುವ ಅಧಿಕಾರಿಯನ್ನು ಅಮಾನತ್ತು ಮಾಡಿ ಯಾವಾಗ ವಿಚಾರಣೆ ನಡೆಸಲಾಗುವುದು ;

(ಇ) ರಾಜ್ಯದ ತೆರೆಗೆಯ ಹಣವನ್ನು ಪೋಲು ಮಾಡಿರುವ ದಾವಣಗೆರೆ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಮೇಲೆ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಿ ನಿಷ್ಪಲ ವೆಚ್ಚವಾದ ಸಂಪೂರ್ಣ ಮೊತ್ತವನ್ನು ಅವರಿಂದ ವಸೂಲಿ ಮಾಡಿ ಸರ್ಕಾರಕ್ಕೆ ಜಮಾ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ; ಇಲ್ಲವಾದಲ್ಲಿ, ಎಂದು ಕ್ರಮ ಕೈಗೊಳ್ಳಲಾಗುವುದು ?